# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:07ನೇ ಫೆಬ್ರವರಿ, 2019**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೊದಲನೆಯ ಹಾಗೂ ಎರಡನೆಯ ಪಟ್ಟಿಯ ರೀತ್ಯಾ)

### 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2019ನೇ ಫೆಬ್ರವರಿ, 06ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಹೆಚ್. ಎಂ. ರೇವಣ್ಣ** ಅವರು ಸೂಚಿಸುವುದು;

ಆ) **ಶ್ರೀ ಐವನ್ ಡಿ' ಸೋಜಾ** ಅವರು ಅನುಮೋದಿಸುವುದು.

......2

## ೦4. ಗಮನ ಸೆಳೆಯುವ ಸೂಚನೆಗಳು

ಅ) **ಡಾ॥ ತೇಜಸ್ವಿನಿ ಗೌಡ** ಅವರು ತೃತೀಯ ಲಿಂಗಿಗಳಿಗೆ ಉದ್ಯೋಗ ಭದ್ರತೆ ಮತ್ತು ಅಸಹಾಯಕ ವಯೋವೃದ್ಧರಿಗೆ ಮಾಶಾಸನ ನೀಡುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಅಡುಗೆಯವರು ಮತ್ತು ಅಡುಗೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ. ಪ್ರಾಣೇಶ್ ಎಂ.ಕೆ**. ಅವರು ಗ್ರಾಮೀಣ ಗ್ರಂಥಾಲಯಗಳಲ್ಲಿ ಕಳೆದ ೩೦ ವರ್ಷಗಳಿಂದ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಕನಿಷ್ಠ ವೇತನವನ್ನು ನಿಗದಿಗೊಳಿಸುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

## ೦5. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಪುಟ್ಟಣ್ಣ** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಡೆಯುತ್ತಿರುವ ಶಾಲೆಗಳಲ್ಲಿ ಸುಮಾರು 10-12 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ರಾಜ್ಯ ಉಚ್ಛನ್ಯಾಯಾಲಯದ ಆದೇಶದಂತೆ ಖಾಯಂಗೊಳಿಸುವುದು ಹಾಗೂ ಸದರಿಯವರುಗಳ ವೇತನವನ್ನು ಪ್ರತಿ ತಿಂಗಳು ಪಾವತಿಸುವ ಬಗ್ಗೆ ಪ್ರಸ್ತಾಪಿಸುವುದು.

ಆ) **ಶ್ರೀ ಎನ್. ರವಿಕುಮಾರ್** ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಅವಧಿ ಮೀರಿದ ಔಷಧಿಗಳು ಸರಬರಾಜು ಮಾಡುತ್ತಿರುವುದರಿಂದ ಅದನ್ನು ಬಳಸುತ್ತಿರುವ ರಾಜ್ಯದ ಜನತೆಯು ಅಡ್ಡ ಪರಿಣಾಮಗಳಿಂದ ಬಳಲುತ್ತಿರುವ ಬಗ್ಗೆ ಹಾಗೂ ಔಷಧಿ ಸರಬರಾಜುದಾರರಿಗೆ ಬಿಲ್ಲುಗಳನ್ನು ಪಾವತಿಸದಿರುವ ಬಗ್ಗೆ ಪ್ರಸ್ತಾಪಿಸುವುದು.

## ೦6. ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---